# ಪತ್ರಿಕಾ ಪ್ರಕಟಣೆ

## ಕರ್ನಾಟಕ ವಾಣಿಜ್ಯ ತೆರಿಗೆಗಳ ಇಲಾಖೆಯಿಂದ ತಂಬಾಕು ಮತ್ತು ಅದರ ಉತ್ಪನ್ನಗಳ ಅಘೋಷಿತ ಗೋದಾಮುಗಳ ಮೇಲೆ ದಾಳಿ

ಕರ್ನಾಟಕ ರಾಜ್ಯದ ವಾಣಿಜ್ಯ ತೆರಿಗೆಗಳ ಇಲಾಖೆಯು ಜೂನ್–2020ರ ಮಾಹೆಯಲ್ಲಿ ಮತ್ತು ಜುಲೈ–2020ರ ಮಾಹೆಯ 10ನೇ ತಾರೀಖಿನ ವರೆಗೆ ರಸ್ತೆ ಜಾಗೃತಿ ಮತ್ತು ತಂಬಾಕು ಉತ್ಪನ್ನಗಳ ಮತ್ತು ಪಾನ್ ಮಸಾಲಗಳ ಅಘೋಷಿತ ಗೋದಾಮುಗಳ ಮೇಲಿನ ದಾಳಿ ಸಂದರ್ಭದಲ್ಲಿ ಒಟ್ಟು 59 ಪ್ರಕರಣಗಳಲ್ಲಿ ರೂ.2.43 ಕೋಟಿ ತೆರಿಗೆ ಮತ್ತು ದಂಡವನ್ನು ವಿಧಿಸಿರುತ್ತದೆ.

ವಾಣಿಜ್ಯ ತೆರಿಗೆಗಳ ಇಲಾಖೆಯ ಅಧಿಕಾರಿಗಳು ರಾಜ್ಯದಾದ್ಯಂತ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಕೋಲಾರ, ರಾಮನಗರ, ಚಿಕ್ಕಬಳ್ಳಾಪುರ, ಮೈಸೂರು, ಚಾಮರಾಜನಗರ, ಮಂಡ್ಯ, ಮಂಗಳೂರು, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ, ಹುಬ್ಬಳ್ಳಿ, ಶಿರಸಿ, ಕಲಬುರಗಿ, ಬೀದರ್, ರಾಯಚೂರು, ಬೆಳಗಾವಿ, ಬಾಗಲಕೋಟೆ, ವಿಜಯಪುರ ಪ್ರದೇಶಗಳಲ್ಲಿ ರಸ್ತೆ ಜಾಗೃತಿ ಚಟುವಟಿಕೆಗಳನ್ನು ನಿರ್ವಹಿಸುವಾಗ ಸರಿಯಾದ ದಾಖಲೆಗಳಿಲ್ಲದೆ ಕಾನೂನುಬಾಹಿರವಾಗಿ ಸಾಗಾಣಿಕೆ ಮಾಡುತ್ತಿದ್ದ ಪಾನ್ ಮಸಾಲ ಮತ್ತು ತಂಬಾಕು ಉತ್ಪನ್ನಗಳ ವಾಹನಗಳನ್ನು ತಡೆಹಿಡಿದು, ತೆರಿಗೆ ಮತ್ತು ದಂಡವನ್ನು ಸರಕು ಮತ್ತು ಸೇವೆಗಳ ತೆರಿಗೆಯ ಕಾನೂನಿನನ್ವಯ ವಿಧಿಸಿರುತ್ತಾರೆ.










ಮುಂದುವರೆದು, ಜಾಗೃತಿ ಮತ್ತು ದಕ್ಷಿಣ ವಲಯ (ಜಾರಿ) ಬೆಂಗಳೂರು ವಿಭಾಗಗಳ ಅಧಿಕಾರಿಗಳು ಬೆಂಗಳೂರು ಗ್ರಾಮಾಂತರದ ಜಿಗಣಿಯಲ್ಲಿ ತಂಬಾಕು ಉತ್ಪನ್ನಗಳನ್ನು ಅನಧಿಕೃತವಾಗಿ ಸಂಗ್ರಹಿಸಿದ ಅಘೋಷಿತ ಗೋದಾಮುಗಳ ಮೇಲೆ ದಾಳಿ ನಡೆಸಿದ್ದು, ದಾಖಲೆಗಳಿಲ್ಲದೆ ಸಂಗ್ರಹಿಸಲಾದ ತಂಬಾಕು ಉತ್ಪನ್ನಗಳ ಮೇಲೆ ಒಟ್ಟು ರೂ.56.04 ಲಕ್ಷಗಳು ತೆರಿಗೆ ಮತ್ತು ದಂಡ ವಿಧಿಸಿರುತ್ತಾರೆ.

ವಾಣಿಜ್ಯ ತೆರಿಗೆಗಳ ಇಲಾಖೆಯು ಪಾನ್ ಮಸಾಲ ಮತ್ತು ಇತರೆ ತಂಬಾಕು ಉತ್ಪನ್ನಗಳ ಸಾಗಾಣಿಕೆಯನ್ನು ಸೂಕ್ಷ್ಮವಾಗಿ ಗಮನವಹಿಸುತ್ತಿದ್ದು, ಸರಕು ಮತ್ತು ಸೇವೆಗಳ ತೆರಿಗೆ ನಿಯಮವನ್ನು ಉಲ್ಲಂಘಿಸುವ ವ್ಯಕ್ತಿಗಳ/ ಸಾಗಾಣಿಕೆದಾರರ ವಿರುದ್ಧ ಕಠಿಣ ಕ್ರಮ ಜರುಗಿಸುವುದಲ್ಲದೇ, ಸದರಿ ಸರಕು ವಾಹನಗಳ ನೋಂದಣಿಯನ್ನು ರದ್ದುಗೊಳಿಸಲು ಶಿಫಾರಸ್ಸು ಮಾಡಸಲಾಗುವುದು.

13.7.2020

( ಶ್ರೀಕರ್ ಎಂ.ಎಸ್ )
ವಾಣಿಜ್ಯ ತೆರಿಗೆಗಳ ಆಯುಕ್ತರು
(ಕರ್ನಾಟಕ), ಬೆಂಗಳೂರು.